# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/225 /2021-22 ದಿನಾಂಕ : 20-09-2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:18-09-2021 ರಂದು ವಾರ್ಡ್ ನಂ.196-ಅಂಜನಾಪುರದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

### ಸಭೆಗೆ ಹಾಜರಾಗಿದ್ದವರ ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಪ್ರಮೋದ್ ಕುಮಾರ್.ಎನ್.ಜಿ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀ ನರೇಂದ್ರ ಕುಮಾರ್.ಎ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀ ರಮೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು | ಗೈರು ಹಾಜರಿರುತ್ತಾರೆ. |
| 4 | ಶ್ರೀ ಯೋಗೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 5 | | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) | ಗೈರು ಹಾಜರಿರುತ್ತಾರೆ. |
| 6 | ಶ್ರೀ ಕೃಷ್ಣಾ ನಾಯಕ್ | ಸಹಾಯಕ ಇಂಜಿನಿಯರ್ (ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ) | ಗೈರು ಹಾಜರಿರುತ್ತಾರೆ. |
| 7 | ಶ್ರೀ ರಂಗಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಗೈರು ಹಾಜರಿರುತ್ತಾರೆ. |
| 8 | ಶ್ರೀ ಸದಾನಂದ | ಕಂದಾಯ ಪರಿವೀಕ್ಷಕರು | ಗೈರು ಹಾಜರಿರುತ್ತಾರೆ. |
| 9 | ಶ್ರೀ ಶ್ರೀನಿವಾಸ್ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಗೈರು ಹಾಜರಿರುತ್ತಾರೆ. |
| 10 | | ಪೋಲೀಸ್ ಇಲಾಖೆ | ಗೈರು ಹಾಜರಿರುತ್ತಾರೆ. |
| 11 | | ತೋಟಗಾರಿಕೆ ಅಧಿಕಾರಿಗಳು | ಗೈರು ಹಾಜರಿರುತ್ತಾರೆ. |
| 12 | ಶ್ರೀ ರಮೇಶ್ | ಬೀದಿ ದೀಪಗಳ ನಿರ್ವಹಣೆ | ಗೈರು ಹಾಜರಿರುತ್ತಾರೆ. |
| 13 | ಶ್ರೀ ಬಿ.ಜೆ.ಶ್ರೀಪತಿ | ರಾಯಲ್ ಪಾರ್ಕ್ ಬಡಾವಣೆ RWA | ಹಾಜರಿರುತ್ತಾರೆ. |
| 14 | ಶ್ರೀ ಗೋವಿಂದರಾಜು | ಹರಿನಗರ RWA | ಹಾಜರಿರುತ್ತಾರೆ. |
| 15 | ಶ್ರೀ ಮುನಿನಾರಾಯಣಸ್ವಾಮಿ | ಅವಲಹಳ್ಳಿ RWA | ಹಾಜರಿರುತ್ತಾರೆ. |
| 16 | ಶ್ರೀ ಫಾರೂಕ್ ಉಲ್ಲಾ | ಅವಲಹಳ್ಳಿ ಕ್ವಾಟ್ರ್ಸ್ RWA | ಹಾಜರಿರುತ್ತಾರೆ. |
| 17 | ಶ್ರೀ ಸೈಯದ್ ರಸೂಲ್ | ಅವಲಹಳ್ಳಿ ಕ್ವಾಟ್ರ್ಸ್ RWA | ಹಾಜರಿರುತ್ತಾರೆ. |
| 18 | ಶ್ರೀನಿವಾಸ್ ಕುಂಬಾಳೆ | ರಾಯಲ್ ಪಾರ್ಕ್ ಬಡಾವಣೆ RWA | ಹಾಜರಿರುತ್ತಾರೆ. |
| 19 | ಶ್ರೀ ಬಿ.ಆರ್.ದೇವಾಡಿಗ | ಶ್ರೀನಿಧಿ ಬಡಾವಣೆ RWA | ಹಾಜರಿರುತ್ತಾರೆ. |

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಂಜನಾಪುರ ವಾರ್ಡ್ ಸಂಖ್ಯೆ.196ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಪ್ರಮೋದ್ ಕುಮಾರ್.ಎನ್.ಜಿ ರವರು ದಿನಾಂಕ: 18-09-2021 ರಂದು ಶನಿವಾರ 11.30ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀ ನರೇಂದ್ರ ಕುಮಾರ್.ಎ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.



Scanned with CamScanner

1. **ಕೋವಿಡ್-19 ನಿರ್ವಹಣೆ:-**

ಕೋವಿಡ್-19 ಹರಡುವುದನ್ನು ತಡೆದಗಟ್ಟಲು ಮುನ್ನೆಚ್ಚರಿಕೆ ಕ್ರಮವಾಗಿ ಸಾರ್ವಜನಿಕರು ಗುಂಪಾಗಿ ಸೇರಿವುದನ್ನು ತಡೆಗಟ್ಟಿ ಮಾಸ್ಕ್‌ಗಳನ್ನು ಸರಿಯಾಗಿ ಧರಿಸುವುದರ ಬಗ್ಗೆ ಕ್ರಮ ಕೈಗೊಳ್ಳಲು ಮಾರ್ಶಲ್‌ಗಳಿಗೆ ಸೂಚಿಸಿರುವುದಾಗಿ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ 18 ವರ್ಷ ಮೇಲ್ಪಟ್ಟ ಎಲ್ಲಾ ಸಾರ್ವಜನಿಕರಿಗೆ Covishield and Covaxin ಲಸಿಕೆ ಪ್ರತಿ ದಿನ ನೀಡುತ್ತಿರುವ ಬಗ್ಗೆ ಆರೋಗ್ಯ ಪರಿವೀಕ್ಷಕರು ಮಾಹಿತಿಯನ್ನು ಸಭೆಗೆ ನೀಡಿರುತ್ತಾರೆ.

2. **ಬೀದಿ ದೀಪಗಳ ನಿರ್ವಹಣೆ:-**

ವಾರ್ಡ್ ವ್ಯಾಪ್ತಿಯಲ್ಲಿನ ಅವಲಹಳ್ಳಿ ಕ್ವಾಟ್ರ್ಸ್ ಸ್ಮಶಾನದ ಹತ್ತಿರ ಬೀದಿ ದೀಪಗಳನ್ನು ತುರ್ತಾಗಿ ಅಳವಡಿಸಲು ಕೋರಿರುತ್ತಾರೆ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಿರುವ ಬೀದಿ ದೀಪಗಳಿಗೆ ಸ್ವಿಚ್ ಅನ್ನು ಅಳವಡಿಸಲು ಸಾರ್ವಜನಿಕರು ಕೋರಿರುವ ಮೇರೆಗೆ ಈ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

3. **ಘನತ್ಯಾಜ್ಯ ನಿರ್ವಹಣೆ:-**

ಶ್ರೀನಿಧಿ ಬಡಾವಣೆಯಲ್ಲಿ ಘನತ್ಯಾಜ್ಯವನ್ನು ಪ್ರತ್ಯೇಕಗೊಳಿಸಿ ಸಾರ್ವಜನಿಕರಿಂದ ಸಮರ್ಪಕವಾಗಿ ಪಡೆದು ವಿಲೇವಾರಿ ಮಾಡಲಾಗುತ್ತಿದೆ ಎಂದು ಶ್ರೀನಿಧಿ ಬಡಾವಣೆ ನಿವಾಸಿಗಳು ಶ್ಲಾಗಿಸಿರುತ್ತಾರೆ.

ಅವಲಹಳ್ಳಿ ಕ್ವಾಟ್ರ್ಸ್ ಬಳಿಯ ಬೃಹತ್ ನೀರುಗಾಲುವೆ ಸುತ್ತಾ ಮುತ್ತಾ, ಮತ್ತು ನಂದಿ ಗಾರ್ಡನ್ ಇಂದ ಅವಲಹಳ್ಳಿ ಟಿಪ್ಪು ವೃತ್ತದ ಕಡೆಗೆ ಮತ್ತು ಹರಿನಗರ ಮಸೀದಿ ಹತ್ತಿರದ ಖಾಲಿ ನಿವೇಶನದಲ್ಲಿ ಸಾರ್ವಜನಿಕರು ಘನತ್ಯಾಜ್ಯವನ್ನು ಬಿಸಾಡುತ್ತಿದ್ದು ಇವುಗಳನ್ನು ತೆರವುಗೊಳಿಸಿ ಮುಂದಿನ ದಿನಗಳಲ್ಲಿ ಸದರಿ ಬ್ಲಾಕ್ ಸ್ಪಾಟ್ಸ್‌ಗಳಾಗದಂತೆ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ, ಬೆಂಗಳೂರು ದಕ್ಷಿಣ ರವರಿಗೆ ಸಭೆಯಲ್ಲಿ ಸೂಚಿಸಲಾಗಿರುತ್ತದೆ.

4. **ಉದ್ಯಾನವನ ನಿರ್ವಹಣೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಾಯಲ್ ಪಾರ್ಕ್ ಬಡಾವಣೆಯ ಪಾದಚಾರಿ ಮಾರ್ಗದ ಟೈಲ್ಸ್‌ಗಳು ಹಾಗೂ ಮುಂಭಾಗದ ಪ್ಲಾಜಾ ಹಾಳಾಗಿದ್ದು ಇದ್ದುನ್ನು ಸರಿಪಡಿಸಲು ತೋಟಗಾರಿಕೆ ಅಧಿಕ್ಷಕರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

5. **ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ)**

ವಾರ್ಡ್ ವ್ಯಾಪ್ತಿಯ ಅವಲಹಳ್ಳಿ ಗುರುಕುಲ್ ಶಾಲೆಯ ರಸ್ತೆಯಲ್ಲಿರುವ ಒಳಚರಂಡಿ ಮ್ಯಾನ್ ಹೋಲ್‌ಗಳನ್ನು ರಸ್ತೆ ಮಟ್ಟಕ್ಕೆ ಸಮತಟ್ಟು ಮಾಡಲು ಕೋರಿರುತ್ತಾರೆ. ಆವಲಹಳ್ಳಿ ಸರ್ಕಾರಿ ಶಾಲೆ ಬಳಿಯ ಒಳಚರಂಡಿ ಪೈಪ್‌ಗಳು ಹಾಳಾಗಿದ್ದು ಇವುಗಳನ್ನು ಬದಲಾಯಿಸಿ ಹೊಸ ಪೈಪ್‌ಗಳನ್ನು ಅಳವಡಿಸಲು ಕೋರಿರುತ್ತಾರೆ. ಹರಿನಗರ ಮುಖ್ಯ ರಸ್ತೆ ಓಂ ಶಕ್ತಿ ದೇವಸ್ಥಾನ ಹಾಗೂ ಸಾರ್ಕರಿ ಶಾಲೆ ಹತ್ತಿರ ಮಳೆ ಬಂದಾಗಲೆಲ್ಲಾ ಒಳಚರಂಡಿ ನೀರು ಮ್ಯಾನ್ ಹೋಲ್ ನಿಂದ ಹೊರ ಹರಿಯುತ್ತಿದ್ದು ಇದರಿಂದಾಗಿ ಸಾರ್ವಜನಿಕರ ಆರೋಗ್ಯ ಮೇಲೆ ದುಷ್ಪರಿಣಾಮ ಬೀರುವ ಸಂಭವ ವಿರುತ್ತದೆ ಎಂದು ದೂರರಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಕೂಡಲೇ ಪರಿಶೀಲಿಸಿ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

6. **ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ)**

ವಾರ್ಡ್ ವ್ಯಾಪ್ತಿಯ ಹರಿನಗರ, ಶ್ರೀನಿಧಿ ಬಡಾವಣೆ ಹಾಗೂ ಇತರೆ ಪ್ರದೇಶಗಳಲ್ಲಿ ಹೊಸದಾಗಿ ಅಂತರ್ಗತ ಕೇಬಲ್‌ಗಳನ್ನು ಅಳವಡಿಸುತ್ತಿದ್ದು ಹಾಗೂ ಚೇಂಬರ್‌ಗಳನ್ನು ನಿರ್ಮಿಸುತ್ತಿದ್ದು ಸದರಿ ಚೇಂಬರ್‌ಗಳು ರಸ್ತೆಯಿಂದ ಸುಮಾರು 5 ರಿಂದ 6 ಮೇಲೆ ಇರುವುದರಿಂದ ವಾಹನ ಸವಾರರು ಹಾಗೂ ಪಾದಚಾರಿಗಳು ಅಪಘಾತಕ್ಕೆ ಒಳಪಡುವ ಸಂಭವವಿರುತ್ತದೆ ಎಂದು ಸಾರ್ವಜನಿಕರು ದೂರಿರುತ್ತಾರೆ.

ಶ್ರೀನಿಧಿ ಬಡಾವಣೆಯಲ್ಲಿ ಬೆಸ್ಕಾಂ ಇಲಾಖೆ ವತಿಯಿಂದ ಮರದ ರೆಂಬೆಗಳನ್ನು ಕತ್ತರಿಸಿ ಬಡಾವಣೆಯ ಖಾಲಿ ನಿವೇಶನಗಳಲ್ಲಿ ಹಾಕಿ ಹೋಗಲಾಗಿರುತ್ತದೆ ಎಂದು ದೂರಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಕೂಡಲೇ ಪರಿಶೀಲಿಸಿ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.



Scanned with CamScanner

7. <u>ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೃಹತ್ ನೀರುಗಾಲುವೆ ವಿಭಾಗ, ಬೊಮ್ಮನಹಳ್ಳಿ ವಲಯ)</u>

ವಾರ್ಡ್ ವ್ಯಾಪ್ತಿಯ ಹರಿನಗರ, ಟಿ.ಸಿ.ಹೆಚ್ ಕಾಲೇಜ್ ರಸ್ತೆಯಿಂದ ಚುಂಚಘಟ್ಟ ಮುಖ್ಯ ರಸ್ತೆ ವರೆಗಿನ ನೀರುಗಾಲುವೆಯನ್ನು ಅಭಿವೃದ್ಧಿ ಪಡಿಸಿ ಆರ್.ಸಿ.ಸಿ ಮೇಲ್ಹಾವಣಿಯನ್ನು ಅಳವಡಿಸಲು ಸಾರ್ವಜನಿಕರು ಕೋರಿರುತ್ತಾರೆ. ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ

8. <u>ಬಿಬಿಎಂಪಿ ಸಹಾಯಕ ಕಾರ್ಯಪಾಲಕ ಅಭಿಯಂತರರು (ಅಂಜನಾಪುರ ಉಪ ವಿಭಾಗ)</u>

ವಾರ್ಡ್ ವ್ಯಾಪ್ತಿಯ ಶ್ರೀನಿಧಿ ಬಡಾವಣೆಯಲ್ಲಿ ಸಾರ್ವಜನಿಕರು ಕೋರಿರುವಂತೆ ರಸ್ತೆ ಬದಿ ಚರಂಡಿಗೆ ಕಲ್ಲು ಚಪ್ಪಡಿಗಳನ್ನು ಅಳವಡಿಸಿರುವ ಬಗ್ಗೆ ಶ್ರೀನಿಧಿ ಬಡಾವಣೆಯ RWA ರವರು ಶ್ಲಾಗಿಸಿರುತ್ತಾರೆ.

ವಾರ್ಡ್ ವ್ಯಾಪ್ತಿಯ ರಾಯಲ್ ಪಾರ್ಕ್ ಬಡಾವಣೆಯ ಉಳಿದ ರಸ್ತೆಗಳಿಗೆ ಡಾಂಬರೀಕರಣ ಕಾಮಗಾರಿಯನ್ನು ಶೀಘ್ರವಾಗಿ ಕೈಗೊಳ್ಳುವಂತೆ ಕೋರಿರುತ್ತಾರೆ, ಅಗಸ್ತ್ಯ ಉದ್ಯಾನವನದ ಮುಂಭಾಗದಲ್ಲಿ ಕಲ್ಲು ಚಪ್ಪಡಿಯನ್ನು ಅಳವಡಿಸಲು ಕೋರಿರುತ್ತಾರೆ ಹಾಗೂ ಬಡಾವಣೆಯ ರಸ್ತೆ ಬದಿ ಚರಂಡಿಗಳಲ್ಲಿ ಬಾಕಿ ಇರುವ ಹೂಳನ್ನು ತೆರವುಗೊಳಿಸಲು ಕೋರಿರುತ್ತಾರೆ ಈ ಬಗ್ಗೆ ಸಹಾಯಕ ಅಭಿಯಂತರರು ಮಾತನಾಡಿ ಸದರಿ ಬಡಾವಣೆಯ ಪೂರ್ವ ಭಾಗದಲ್ಲಿ ಈಗಾಗಲೇ ಡಾಂಬರೀಕರಣ ಪೂರ್ಣಗೊಂಡಿರುತ್ತದೆ, ಮಧ್ಯ ಭಾಗದ ಬಡಾವಣೆಯಲ್ಲಿ BWSSB ವತಿಯಿಂದ ಅಗೆದಿದ್ದ ರಸ್ತೆ ಭಾಗಗಳಿಗೆ ಡಾಂಬರೀಕರಣ ಮಾಡಲು Wet Mix ಅಳವಡಿಸುವ ಕಾಮಗಾರಿ ಪ್ರಗತಿಯಲ್ಲಿರುತ್ತದೆ ಹಾಗೂ ಪಶ್ಚಿಮ ಭಾಗದ ಬಡಾವಣೆಗೆ ಡಾಂಬರೀಕರಣ ಮಾಡಲು ಕಾಮಗಾರಿಯನ್ನು 110 ಹಳ್ಳಿಗಳ ಅನುದಾನದಲ್ಲಿ ಕೈಗೊಳ್ಳಲಾಗಿದ್ದು ಸದರಿ ಕಾಮಗಾರಿಯನ್ನು ಟೆಂಡರ್ ಪ್ರಕ್ರಿಯೇ ಪೂರ್ಣಗೊಂಡ ನಂತರ ಕೈಗೊಳ್ಳಲಾಗುವು ಎಂದು ತಿಳಿಸಿರುತ್ತಾರೆ.

ವಾರ್ಡ್ ವ್ಯಾಪ್ತಿಯ ಅವಲಹಳ್ಳಿ ಪ್ರದೇಶದಲ್ಲಿ ರಸ್ತೆಗಳು ಬಹಳ ಹಾಳಾಗಿದ್ದು, ಅವಲಹಳ್ಳಿ ಕ್ವಾಟ್ರ್ಸ್ ಪ್ರದೇಶದಲ್ಲಿ ಬಾಕಿ ಇರುವ ರಸ್ತೆಗಳಿಗೆ ಕಾಂಕ್ರೀಟ್ ಅಳವಡಿಸಲು ಕೋರಿತ್ತಾರೆ. ಈ ಬಗ್ಗೆ ಸಹಾಯಕ ಅಭಿಯಂತರರು ಮಾತನಾಡಿ ಸದರಿ ಪ್ರದೇಶದ ರಸ್ತೆಗಳಿಗೆ ಕಾಂಕ್ರೀಟ್ ಅಳವಡಿಸುವ ಕಾಮಗಾರಿಯನ್ನು 110 ಹಳ್ಳಿಗಳ ಅನುದಾನದಲ್ಲಿ ಕೈಗೊಳ್ಳಲಾಗಿದ್ದು ಸದರಿ ಕಾಮಗಾರಿಯನ್ನು ಟೆಂಡರ್ ಪ್ರಕ್ರಿಯೇ ಪೂರ್ಣಗೊಂಡ ನಂತರ ಕೈಗೊಳ್ಳಲಾಗುವು ಎಂದು ತಿಳಿಸಿರುತ್ತಾರೆ.

ವಾರ್ಡ್ ವ್ಯಾಪ್ತಿಯ ಅವಲಹಳ್ಳಿ ಕನ್ನಡ ಸರ್ಕಾರಿ ಶಾಲೆ ಬಳಿಯ ಧ್ವಜ ಸ್ತಂಭದ ಹತ್ತಿರ ಸಿ.ಸಿ ಕ್ಯಾಮರವನ್ನು ಅಳವಡಿಸಲು ಕೋರಿರುತ್ತಾರೆ.

ಅವಲಹಳ್ಳಿ ಕ್ವಾಟ್ರ್ಸ್ ಬಳಿಯ ಸ್ಮಶಾನಕ್ಕೆ ಹೊಸದಾಗಿ ಕೊಳವೆ ಬಾವಿ ಅಳವಡಿಸಲು ಕೋರಲಾಗಿರುತ್ತದೆ.

ಅಮೃತನಗರ ಮುಖ್ಯ ರಸ್ತೆಯಿಂದ ಕೊತ್ತನೂರು ಗ್ರಾಮಕ್ಕೆ ಸಂಪರ್ಕಿಸುವ ರಸ್ತೆಯು ಹಾಳಾಗಿದ್ದು ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗಿದ್ದು ರಸ್ತೆಗೆ ಡಾಂಬರೀಕರಣ ಮಾಡಲು ಕೋರಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಕೂಡಲೇ ಪರಿಶೀಲಿಸಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಅಂಜನಾಪುರ ಉಪ ವಿಭಾಗ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ

ಅದರಂತೆ ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಪ್ರಮೋದ್ ಕುಮಾರ್ ರವರು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.196 ಅಂಜನಾಪುರ

-ಸಹಿ-
ಅಧ್ಯಕ್ಷಕರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.196 ಅಂಜನಾಪುರ



Scanned with CamScanner